ಯೋಜನೆಗಾಗಿ ತಿದ್ದುಪಡಿ ಮಾಡುವುದು ಅವಶ್ಯಕವಾಗಿದೆ. ಆದುದರಿಂದ, ಈ ವಿಧೇಯಕಕ್ಕೆ ತಿದ್ದುಪಡಿ ತರುತ್ತಿದ್ದೇವೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಪ್ರಸ್ತಾವ ಏನೆಂದರೆ

ಅಧ್ಯಕ್ಷರು : "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಅನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :

"ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

*** ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು**

(ಅನುಬಂಧ –III)

ಈ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕ, 2006

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಯಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲಾಯಿತು

ಶ್ರೀ ಬಿ.ಎಸ್. ಹೊರಟ್ಟಿ : ಮಾನ್ಯ ಅಧ್ಯಕ್ಷರೆ, ಮೊದಲು ಕೇವಲ annual report ಅಷ್ಟೇ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ ಮುಂದಿಡಲಾಗುತ್ತಿತ್ತು. ಈಗ ತಿದ್ದುಪಡಿ ಮಾಡಿರುವ ಪ್ರಕಾರ audit account and report ಎರಡನ್ನೂ ಈ ಸದನದಲ್ಲಿ ಮಂಡಿಸಬೇಕಾಗುತ್ತದೆ. ವಿಧಾನ ಮಂಡಲದ ಸದನದ ಮುಂದಿರುವ ಕಾಗದ ಪತ್ರಗಳ ಸಮಿತಿಗೆ ಶಿಫಾರಸ್ಸು ಮಾಡುವುದಕ್ಕೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಲೆಕ್ಕಪತ್ರಗಳನ್ನು ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸಬೇಕೆಂದು ಈ ಉಪಬಂಧವನ್ನು ಕಲ್ಪಿಸಬೇಕೆಂಬ ಮೂಲ ಉದ್ದೇಶ ಇದೆ. ಆದ್ದರಿಂದ ಈ ವಿಧೇಯಕವನ್ನು ಮಂಡಿಸಲು ಅನುಮತಿ ನೀಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು : ಯಾರಾದರೂ ಚರ್ಚೆಯಲ್ಲಿ ಭಾಗವಹಿಸುತ್ತೀರಾ?

ಅಧ್ಯಕ್ಷರು : ಪ್ರಸ್ತಾವ ಏನೆಂದರೆ.

"2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಪಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಪ್ರಸ್ತಾವ ಏನೆಂದರೆ

ಅಧ್ಯಕ್ಷರು : "ಖಂಡ 2 ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ.

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ...

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಸವರಾಜ್ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

(ಅನುಬಂಧ–4)

(ಉ) ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ 2005 ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್. ಡಿ. ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.